ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ:ಇ-ಆಡಳಿತ/ಶಿಕ್ಷಕ ಮಿತ್ರ/2020-21 ದಿನಾಂಕ: 03-09-2021

**-:ಜ್ಞಾಪನಾ:-**

ವಿಷಯ: ಅಧಿಕಾರಿಗಳು ಹಾಗೂ ಬೋಧಕೇತರ ನೌಕರರ ಸೇವಾ ಮಾಹಿತಿಯನ್ನು ಇ.ಇ.ಡಿ.ಎಸ್ ತಂತ್ರಾಂಶದಲ್ಲಿ ಇಂದೀಕರಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಹೊಸದಾಗಿ ನೇಮಕಗೊಂಡ ಮತ್ತು ವರ್ಗಾವಣೆಗೊಂಡ ಅಧಿಕಾರಿಗಳು ಹಾಗೂ ಬೋಧಕೇತರ ನೌಕರರ ಸೇವಾ ಮಾಹಿತಿಯನ್ನು ಇ.ಇ.ಡಿ.ಎಸ್ ತಂತ್ರಾಂಶದಲ್ಲಿ ಸಂಪೂರ್ಣವಾಗಿ ಇಂದೀಕರಿಸಲು ಹಾಗೂ ಈ ಕೆಳಕಂಡ ಅಂಶಗಳನ್ನು ಪೂರ್ಣಗೊಳಿಸಲು ಈ ಮೂಲಕ ತಿಳಿಸಿದೆ.

- ಡಿ.ಡಿ.ಒ ಗಳು ತಮ್ಮ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿಗಳು ಹಾಗೂ ಬೋಧಕೇತರ ನೌಕರರ ಸೇವಾ ಮಾಹಿತಿಯನ್ನು ಸಂಪೂರ್ಣವಾಗಿ (ಸೇವೆಗೆ ಸೇರಿದ ದಿನಾಂಕ, ಹುದ್ದೆ, ನಿಯುಕ್ತಿಗೊಂಡ ಸ್ಥಳ, ಜೋನ್ ಮತ್ತು ಇತ್ಯಾದಿ) ಇಂದೀಕರಿಸುವುದು.
- ಹೊಸದಾಗಿ ನೇಮಕಗೊಂಡ ಅಧಿಕಾರಿಗಳು ಹಾಗೂ ಬೋಧಕೇತರ ನೌಕರರ ಸೇವಾ ಮಾಹಿತಿಯನ್ನು ಸಂಪೂರ್ಣವಾಗಿ ಇಂದೀಕರಿಸುವುದು.
- ಟ್ರಾನ್ಸ್‌ಫರ್ ಇನ್/ಔಟ್ ನಲ್ಲಿ ರಿಲೀವ್ಸ್ ಮತ್ತು ಟ್ರಾನ್ಸ್‌ಫರ್ ಇನ್ ಆಗದೇ ಉಳಿದಿರುವ ಸಿಬ್ಬಂಧಿಗಳ ಮಾಹಿತಿಯನ್ನು ಪರಿಶೀಲಿಸಿ ಇಂದೀಕರಿಸುವುದು.

ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು ಹಾಗೂ ಡಿ.ಡಿ.ಒ ಗಳು ಈ ಕಾರ್ಯವನ್ನು ಪ್ರಥಮಾದ್ಯತೆ ಮೇರೆಗೆ ನಿರ್ವಹಿಸುವುದು. ಅಧಿಕಾರಿಗಳು ಹಾಗೂ ಬೋಧಕೇತರ ನೌಕರರ ಸೇವಾ ಮಾಹಿತಿಯಲ್ಲಿ ತಪ್ಪುಗಳಾಗಿರುವ ಬಗ್ಗೆ ಅಥವಾ ಈ ಕಾರಣದಿಂದಾಗಿ ಆನ್‌ಲೈನ್ ಸೇವಾ ಸೌಲಭ್ಯಗಳಿಂದ ವಂಚಿತರಾಗಿರುವ ಯಾವುದೇ ದೂರುಗಳು ಈ ಕಛೇರಿಗೆ ಸ್ವೀಕೃತವಾದಲ್ಲಿ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ಡಿ.ಡಿ.ಒ ರವರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದೆಂದು ಈ ಮೂಲಕ ತಿಳಿಸಿದೆ.

ಸಂಬಂಧಿಸಿದಂತೆ ಯಾವುದೇ ತಾಂತ್ರಿಕ ಗೊಂದಲಗಳಿದ್ದಲ್ಲಿ ವಿವರವನ್ನು karonlineserviceshelp@gmail.com ಗೆ ಇ-ಮೇಲ್ ಮುಖೇನ ಸಲ್ಲಿಸಿ ಪರಿಹಾರ ಕಂಡುಕೊಳ್ಳಲು ತಿಳಿಸಿದೆ.

[ವಿ ಅನ್ಬುಕುಮಾರ್]

ಆಯುಕ್ತರು

**ಪ್ರತಿಯನ್ನು:**

1. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು ಇವರಿಗೆ ಮಾಹಿತಿಗಾಗಿ

**ಇವರಿಗೆ,**

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ ರವರ ಇವರಿಗೆ ಮಾಹಿತಿಗಾಗಿ
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ರವರ ಇವರಿಗೆ ಮಾಹಿತಿಗಾಗಿ

3. ನಿರ್ದೇಶಕರು (ಪ್ರಾಥಮಿಕ ಶಿಕ್ಷಣ), ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
4. ನಿರ್ದೇಶಕರು (ಪ್ರೌಢಶಿಕ್ಷಣ) ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
5. ನಿರ್ದೇಶಕರು (ಮೈನಾರಿಟಿ) ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
6. ನಿರ್ದೇಶಕರು (ಡಿ.ಎಸ್.ಇ.ಆರ್.ಟಿ), ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7. ನಿರ್ದೇಶಕರು ಕ.ಪ್ರೌ.ಶಿ.ಪ.ಮಂಡಳಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
8. ನಿರ್ದೇಶಕರು ಇತರೆ ಪರೀಕ್ಷೆಗಳು, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
9. ನಿರ್ದೇಶಕರು ಕ.ಪ.ಪು.ಸಂಘ (ರಿ), ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
10. ನಿರ್ದೇಶಕರು ಸಿಸ್ಲೆಪ್, ಧಾರವಾಡ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
11. ವಿಭಾಗೀಯ ಜಂಟಿ ನಿರ್ದೇಶಕರು, ಬೆಂಗಳೂರು, ಮೈಸೂರು, ಬೆಳಗಾಂ, ಕಲ್ಬುರ್ಗಿ ವಿಭಾಗ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
12. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
13. ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
14. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ (ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರ ಮೂಲಕ)
15. ರಾಜ್ಯದ ಎಲ್ಲಾ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ)
16. ಹಿರಿಯ ಸಹಾಯಕ ನಿರ್ದೇಶಕರು (ಆನ್ ಲೈನ್ ಸೇವೆಗಳು), ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ
17. ಹಿರಿಯ ಸಹಾಯಕ ನಿರ್ದೇಶಕರು (ಇ-ಆಡಳಿತ ಶಾಖೆ), ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಣೆಗಾಗಿ
18. ಕಛೇರಿ ಪ್ರತಿ.